**All India Radio: Bangalore**
**National Bulletin In Kannada**
**19.01.2026  1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.01.2026  1.10 pm**

**<>><><*><><<>**

ಮುಖ್ಯಾಂಶಗಳು

**೧. ಉತ್ತರಪ್ರದೇಶ ವಿಧಾನಸಭೆಯಲ್ಲಿಂದು ೮೬ನೇ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮ್ಮೇಳನ ಆರಂಭ**

**೨. ಎನ್‌ಡಿಆರ್‌ಎಫ್ ೨೧ನೇ ಸಂಸ್ಥಾಪನಾ ದಿನ ; ಪ್ರಧಾನಿ, ಗೃಹ ಸಚಿವರಿಂದ ಸಿಬ್ಬಂದಿ ಕಾರ್ಯವೈಖರಿ ಬಗ್ಗೆ ಶ್ಲಾಘನೆ**

**೩. ಪ್ರಧಾನಿ ಆಹ್ವಾನದ ಮೇರೆಗೆ ಇಂದು ಯುಎಇ ಅಧ್ಯಕ್ಷರ ಭಾರತ ಭೇಟಿ; ಕಾರ್ಯತಂತ್ರ ಪಾಲುದಾರಿಕೆ ಬಲವರ್ಧನೆಗೆ ಅವಕಾಶ**

**೪. ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ; ವಡೋದರದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿ**

**<>><><*><><<>**

೮೬ನೇ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮ್ಮೇಳನ ಉತ್ತರಪ್ರದೇಶ ವಿಧಾನಸಭೆಯಲ್ಲಿಂದು ಆರಂಭವಾಗಲಿದೆ. ಲೋಕಸಭಾಧ್ಯಕ್ಷ  ಓಂ ಬಿರ್ಲಾ ಉದ್ಘಾಟನಾ ಅಧಿವೇಶನ ಉದ್ದೇಶಿಸಿ ಮಾತನಾಡಲಿದ್ದಾರೆ.

ಸಮ್ಮೇಳನದ ಸಂದರ್ಭದಲ್ಲಿ ಪೀಠಾಸೀನಾಧಿಕಾರಿಗಳು, ಕಾರ್ಯದರ್ಶಿಗಳು ಮತ್ತು ಗಣ್ಯ ಪ್ರತಿನಿಧಿಗಳು ಶಾಸಕಾಂಗ ಕಾರ್ಯ ವಿಧಾನಗಳು, ಸಂಸದೀಯ ಸಂಪ್ರದಾಯಗಳು, ಸದನದ ನಡವಳಿಕೆ, ಉತ್ತಮ ಆಡಳಿತ ಮತ್ತು ಪ್ರಸ್ತುತ ಶಾಸಕಾಂಗ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಉತ್ತರಪ್ರದೇಶ ವಿಧಾನಸಭಾಧ್ಯಕ್ಷ ಸತೀಶ್ ಮಹಾನ ಸ್ವಾಗತ ಭಾಷಣ ಮಾಡಲಿದ್ದು, ರಾಜ್ಯಸಭೆ ಉಪಸಭಾಪತಿ ಹರಿವಂಶ್ ಮತ್ತು ಉತ್ತರಪ್ರದೇಶ ವಿಧಾನಸಭೆ ವಿರೋಧ ಪಕ್ಷದ ನಾಯಕಿ ಮಾತಾ ಪ್ರಸಾದ್ ಪಾಂಡೆ, ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

**<>><><*><><<>**

ಭಾರತದ ವಿಪತ್ತು ನಿರ್ವಹಣಾ ವ್ಯವಸ್ಥೆಯಲ್ಲಿ ಅತ್ಯಂತ ಮಹತ್ವದ ಪಾತ್ರ ವಹಿಸುತ್ತಿರುವ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ಪಡೆ-ಎನ್‌ಡಿಆರ್‌ಎಫ್ ಇಂದು ತನ್ನ ೨೧ನೇ ಸಂಸ್ಥಾಪನಾ ದಿನವನ್ನು ಆಚರಿಸುತ್ತಿದೆ. ೨೦೦೫ರ ವಿಪತ್ತು ನಿರ್ವಹಣಾ ಕಾಯ್ದೆಯಡಿ ೨೦೦೬ ರ ಜನವರಿ ೧೯, ರಂದು ಅಸ್ತಿತ್ವಕ್ಕೆ ಬಂದ ಈ ಪಡೆಯು, ಕಳೆದ ಎರಡು ದಶಕಗಳಲ್ಲಿ ದೇಶದ ನಂಬಿಕಸ್ತ ಪಡೆಯಾಗಿ ಹೊರಹೊಮ್ಮಿದೆ.  ಪ್ರವಾಹ, ಭೂಕುಸಿತ, ಭೂಕಂಪ ಹಾಗೂ ಚಂಡಮಾರುತಗಳಂತಹ ತುರ್ತು

ಸಂದರ್ಭಗಳಲ್ಲಿ ಕ್ಷಿಪ್ರವಾಗಿ ಸ್ಪಂದಿಸುವ ಮೂಲಕ ಸಾವಿರಾರು ಜೀವಗಳನ್ನು ಉಳಿಸಿರುವ ಈ ಪಡೆಯ ಶಿಸ್ತುಬದ್ಧ ಕಾರ್ಯವೈಖರಿ ಜಾಗತಿಕ ಮಟ್ಟದಲ್ಲೂ ಮೆಚ್ಚುಗೆಗೆ ಪಾತ್ರವಾಗಿದೆ. ಎನ್‌ಡಿಆರ್‌ಎಫ್ ಸಂಸ್ಥಾಪನಾ ದಿನವಾದ ಇಂದು, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವು ಗಣ್ಯರು ಎನ್‌ಡಿಆರ್‌ಎಫ್ ಸಿಬ್ಬಂದಿಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ವಿಪತ್ತಿನ ಸಂದರ್ಭದಲ್ಲಿ ವೃತ್ತಿಪರತೆ ಮತ್ತು ದೃಢಸಂಕಲ್ಪ ಹೊಂದಿರುವ ಎನ್‌ಡಿಆರ್‌ಎಫ್ ಸಿಬ್ಬಂದಿಗೆ ದೇಶ ಇಂದು ಮೆಚ್ಚುಗೆ ವ್ಯಕ್ತಪಡಿಸುತ್ತದೆ ಎಂದಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ತಮ್ಮ ಸಂದೇಶದಲ್ಲಿ, ಇತರರ ಸುರಕ್ಷತೆಗಾಗಿ ತಮ್ಮನ್ನು ತಾವು ತ್ಯಾಗ ಮಾಡಿದ ಎನ್‌ಡಿಆರ್‌ಎಫ್ ಹುತಾತ್ಮರಿಗೆ ನಮನ ಸಲ್ಲಿಸಿದ್ದಾರೆ.

**<><><*><><<>**

ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಯುನೈಟೆಡ್ ಅರಬ್ ಎಮಿರೇಟ್ಸ್ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಇಂದು ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ಈ ಭೇಟಿಯು ಭಾರತ-ಯುಎಇ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಮುನ್ನಡೆಸಲು ಮತ್ತು ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಉಭಯ ನಾಯಕರಿಗೆ ಅವಕಾಶವನ್ನು ಒದಗಿಸುತ್ತದೆ ಎಂದು ನಿರೀಕ್ಷಿಸಲಾಗಿದೆ. ಇದು ಯುಎಇ ಅಧ್ಯಕ್ಷರಾದ ನಂತರ ದೇಶಕ್ಕೆ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಮೂರನೇ ಅಧಿಕೃತ ಭೇಟಿಯಾಗಿದೆ. ಕಳೆದ ಒಂದು ದಶಕದಲ್ಲಿ ಅವರ ಐದನೇ ಭೇಟಿಯಾಗಿದೆ. ೨೦೨೪ ರಲ್ಲಿ ಅಬುಧಾಬಿ ರಾಜ ಕುಮಾರ ಶೇಖ್ ಖಲೀದ್ ಬಿನ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಮತ್ತು ೨೦೨೫ ರಲ್ಲಿ ದುಬೈ ರಾಜ ಕುಮಾರ ಮತ್ತು ಯುಎಇ ಉಪ ಪ್ರಧಾನ ಮಂತ್ರಿ ಶೇಖ್ ಹಮ್ದಾನ್ ಬಿನ್ ಮೊಹಮ್ಮದ್ ಬಿನ್ ರಶೀದ್ ಅಲ್ ಮಕ್ತೌಮ್ ಅವರ ಭೇಟಿಗಳು ಸೇರಿದಂತೆ ಇತ್ತೀಚಿನ ಉನ್ನತ ಮಟ್ಟದ ವಿನಿಮಯಗಳ ಮೇಲೆ ಈ ಪ್ರವಾಸ ಕೈಗೊಳ್ಳಲಾಗಿದೆ.

**<><><*><><<>**

ನವದೆಹಲಿಯ ಭಾರತ್ ಮಂಟಪಂನಲ್ಲಿ ಇದೆ ೨೧ರಿಂದ ಚುನಾವಣಾ ಆಯೋಗ ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣೆ ಕುರಿತ ಇಂಡಿಯಾ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಿದೆ. ಮೂರು ದಿನಗಳ ಈ ಸಮ್ಮೇಳನ ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣಾ ಕ್ಷೇತ್ರದಲ್ಲಿ ಭಾರತ ಆಯೋಜಿಸುತ್ತಿರುವ ಅತಿದೊಡ್ಡ ಜಾಗತಿಕ ಸಮ್ಮೇಳನವಾಗಲಿದೆ. ಕಾರ್ಯಕ್ರಮದಲ್ಲಿ ೭೦ಕ್ಕೂ ಹೆಚ್ಚು ದೇಶಗಳನ್ನು ಪ್ರತಿನಿಧಿಸುವ ಸುಮಾರು ೧೦೦ ಅಂತಾರಾಷ್ಟ್ರೀಯ ಪ್ರತಿನಿಧಿಗಳು ಭಾಗವಹಿಸುವ ನಿರೀಕ್ಷೆಯಿದೆ. ಇದರ ಜೊತೆಗೆ ಅಂತಾರಾಷ್ಟ್ರೀಯ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಚುನಾವಣಾ ಕ್ಷೇತ್ರದ ತಜ್ಞರು ಪಾಲ್ಗೊಳ್ಳಲಿದ್ದಾರೆ. ಈ ವೇಳೆ ಚುನಾವಣಾ ಆಯೋಗ, ಚುನಾವಣಾ ನಿರ್ವಹಣಾ ಸಂಸ್ಥೆಗಳೊಂದಿಗೆ

ಪ್ರಸ್ತುತ ಎದುರಿಸುತ್ತಿರುವ ವಿವಿಧ ಸವಾಲುಗಳ ಕುರಿತು ಚರ್ಚೆ ಹಾಗೂ ಸಹಕಾರಕ್ಕಾಗಿ ೪೦ಕ್ಕೂ ಹೆಚ್ಚು ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದೆ.

<>><><*><><<>

ಸ್ವಿಟ್ಜರ್ಲೆಂಡ್‌ನ ದಾವೋಸ್‌ನಲ್ಲಿ ವಿಶ್ವ ಆರ್ಥಿಕ ವೇದಿಕೆ ಸಭೆ ಇಂದಿನಿಂದ ಆರಂಭವಾಗಲಿದೆ. ದಾವೋಸ್‌ನಲ್ಲಿ ನಡೆಯುವ ೫೬ನೇ ವಾರ್ಷಿಕ ಸಭೆಯಲ್ಲಿ ೩ ಸಾವಿರಕ್ಕೂ ಹೆಚ್ಚು ಜಾಗತಿಕ ನಾಯಕರು ಭಾಗವಹಿಸುತ್ತಿದ್ದಾರೆ. ಐದು ದಿನಗಳ ಜಾಗತಿಕ ಚರ್ಚಾಕೂಟದಲ್ಲಿ ಭಾಗವಹಿಸಲು ೧೦೦ಕ್ಕೂ ಹೆಚ್ಚು ಭಾರತೀಯ ಕಾರ್ಯನಿರ್ವಹಣಾಧಿಕಾರಿಗಳು ಸರ್ಕಾರಿ ನಿಯೋಗದೊಂದಿಗೆ ದಾವೋಸ್ ತಲುಪಿದ್ದಾರೆ. ಅಶ್ವಿನಿ ವೈಷ್ಣವ್, ಪ್ರಹ್ಲಾದ್ ಜೋಶಿ ಮತ್ತು ಕೆ ರಾಮಮೋಹನ್ ನಾಯ್ಡು ಸೇರಿದಂತೆ ಹಿರಿಯ ಕೇಂದ್ರ ಸಚಿವರು ಭಾಗವಹಿಸುವ ನಿರೀಕ್ಷೆಯಿದ್ದು, ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ, ಮಹಾರಾಷ್ಟ್ರ, ಆಂಧ್ರಪ್ರದೇಶ, ಮಧ್ಯಪ್ರದೇಶ, ಅಸ್ಸಾಂ ಮತ್ತು ಜಾರ್ಖಂಡ್ ಮುಖ್ಯಮಂತ್ರಿಗಳು ತಮ್ಮ ರಾಜ್ಯಗಳನ್ನು ಸಂಭಾವ್ಯ ಹೂಡಿಕೆದಾರರಿಗೆ ಪ್ರದರ್ಶಿಸಲಿದ್ದಾರೆ. ಕರ್ನಾಟಕ, ಉತ್ತರ ಪ್ರದೇಶ, ಕೇರಳ ಮತ್ತು ತೆಲಂಗಾಣ ಸೇರಿದಂತೆ ವಿವಿಧ ರಾಜ್ಯ ಸರ್ಕಾರಗಳ ಮಂಟಪಗಳು ಸಹ ಇಲ್ಲಿವೆ.

<>><><*><><<>

ಕಾಂಗ್ರೆಸ್ ಪಕ್ಷವು ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆಯ ಬಗ್ಗೆ ದೇಶದ ಜನರ ದಾರಿ ತಪ್ಪಿಸುತ್ತಿದೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಆರೋಪಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಕಾಯ್ದೆಯು ಹಿಂದಿನ ೧೦೦ ದಿನಗಳ ಉದ್ಯೋಗದಿಂದ ಪ್ರತಿ ಗ್ರಾಮೀಣ ಕುಟುಂಬಕ್ಕೆ ಕನಿಷ್ಠ ೧೨೫ ದಿನಗಳ ಕೂಲಿ ಉದ್ಯೋಗವನ್ನು ಖಾತರಿಪಡಿಸುತ್ತದೆ ಎಂದು ಸಮರ್ಥಿಸಿಕೊಂಡಿದ್ದಾರೆ. ಮನ್ರೇಗಾ ಅಡಿಯಲ್ಲಿ ಹತ್ತು ಕೋಟಿ ಆಸ್ತಿಗಳನ್ನು ರಚಿಸಲಾಗಿದೆ, ಅದರಲ್ಲಿ ೮.೫ ಕೋಟಿ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ರಚಿಸಲಾಗಿದೆ. ಅವರ ಸರ್ಕಾರದ ಅಡಿಯಲ್ಲಿ ೨೫ ಕೋಟಿ ಜನರನ್ನು ಬಡತನದಿಂದ ಹೊರತರಲಾಗಿದೆ ಎಂದು ತಿಳಿಸಿದ್ದಾರೆ.

<>><><*><><<>

೨೦೩೦ ರ ವೇಳೆಗೆ ಭಾರತವು ೪ ಸಾವಿರ ಡಾಲರ್ ತಲಾ ಆದಾಯವನ್ನು ತಲುಪುವ ನಿರೀಕ್ಷೆಯಿದೆ. ಇದು ಮಧ್ಯಮ-ಆದಾಯದ ಉನ್ನತ ದೇಶವಾಗಿ ಪರಿವರ್ತನೆಗೊಳ್ಳಲು ಅನುವು ಮಾಡಿಕೊಡುತ್ತದೆ ಎಂದು ಭಾರತೀಯ ಸ್ಟೇಟ್ ಬ್ಯಾಂಕ್-ಎಸ್‌ಬಿಐ ಸಂಶೋಧನಾ ವರದಿ ತಿಳಿಸಿದೆ. ೨೦೨೫ರಲ್ಲಿ, ಭಾರತದ ಆರ್ಥಿಕತೆಯು ಕೇವಲ ನಾಲ್ಕು ವರ್ಷಗಳಲ್ಲಿ ೪ ಟ್ರಿಲಿಯನ್ ಡಾಲರ್ ಗಡಿಯನ್ನು ತಲುಪಿದೆ. ಮುಂದಿನ ಎರಡು ವರ್ಷಗಳಲ್ಲಿ ಭಾರತ ೫ ಟ್ರಿಲಿಯನ್ ಡಾಲರ್ ಆರ್ಥಿಕತೆಯನ್ನು ತಲುಪಲಿದೆ ಎಂದು ವರದಿಗಳು ತಿಳಿಸಿವೆ. ಸ್ವಾತಂತ್ರ್ಯದ ೬೨ ವರ್ಷಗಳ ನಂತರ ೨೦೦೯ ರಲ್ಲಿ ತಲಾ ಆದಾಯವು ೧ ಸಾವಿರ ಡಾಲರ್ ತಲುಪಿತ್ತು ಎಂದು ವರದಿ ಮಾಡಿದೆ. ೨೦೧೯ ರಲ್ಲಿ ತಲಾ ಆದಾಯವು ೨ ಸಾವಿರ ಡಾಲರ್‌ಗೆ ದ್ವಿಗುಣಗೊಂಡಿದೆ ಮತ್ತು

೨೦೨೬ರ ವೇಳೆಗೆ ೩ ಸಾವಿರ ಡಾಲರ್‌ಗಳನ್ನು ದಾಟುವ ನಿರೀಕ್ಷೆಯಿದೆ. ಕಳೆದ ದಶಕದಲ್ಲಿ ಭಾರತದ ಬೆಳವಣಿಗೆಯ ಕಾರ್ಯಕ್ಷಮತೆ ಬಲಗೊಂಡಿದೆ ಎಂದು ವರದಿ ಹೇಳಿದೆ.

**<>><><*><><<>**

ಪೋಲ್ಯಾಂಡ್ ಉಪಪ್ರಧಾನಿ ಮತ್ತು ವಿದೇಶಾಂಗ ಸಚಿವ ರಾಡೋಸ್ಲಾವ್ ಸಿಕೋರ್ಸ್ಕಿ ಇಂದು ನವದೆಹಲಿಯಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿ ಮಾಡಲಿದ್ದಾರೆ. ಸಿಕೋರ್ಸ್ಕಿ ಅವರು ಭಾರತಕ್ಕೆ ಮೂರು ದಿನಗಳ ಭೇಟಿಯಲ್ಲಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಸಿಕೋರ್ಸ್ಕಿ ಅವರ ಈ ಭೇಟಿಯು ಭಾರತ ಮತ್ತು ಪೋಲ್ಯಾಂಡ್ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವತ್ತ ಕೇಂದ್ರೀಕೃತವಾಗಿವೆ ಎಂದು ಹೇಳಿದರು.

**<>><><*><><<>**

ಮೆಲ್ಬೋರ್ನ್ ನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯನ್ ಓಪನ್ ಗ್ರ್ಯಾಂಡ್ ಸ್ಲಾಮ್ ಟೆನ್ನಿಸ್ ಟೂರ್ನಿಯ ಸಿಂಗಲ್ಸ್ ವಿಭಾಗದ ಮೊದಲ ಸುತ್ತಿನ ಪಂದ್ಯದಲ್ಲಿಂದು ರಷ್ಯಾದ ಡೆನಿಲ್ ಮೆಡ್ವೆಡೆವ್, ನೆದರ್‌ಲ್ಯಾಂಡ್‌ನ ಯೆಸ್ಪರ್ ಡೆಯಾಂಗ್ ವಿರುದ್ಧ ೭-೫, ೬-೨, ೭-೬ ನೇರ ಸೆಟ್‌ಗಳ ಅಂತರದಲ್ಲಿ ಗೆಲುವು ದಾಖಲಿಸಿ ಶುಭಾರಂಭ ಕಂಡಿದ್ದಾರೆ.

**<>><><*><><<>**

ಗುಜರಾತ್‌ನ ಕೊಟಂಬಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯುಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಈವರೆಗೆ ಆಡಿರುವ ನಾಲ್ಕೂ ಪಂದ್ಯಗಳಲ್ಲಿ ಗೆಲುವು ಸಾಧಿಸಿರುವ ಆರ್‌ಸಿಬಿ ತಂಡ ಸತತ ಐದನೇ ಗೆಲುವಿನ ಹಂಬಲದಲ್ಲಿದ್ದಾರೆ. ಗುಜರಾತ್ ತಂಡ ಸತತ ೨ ಸೋಲಿನ ಬಳಿಕ ಇಂದು ಗೆಲುವು ದಾಖಲಿಸುವ ತವಕದೊಂದಿಗೆ ಕಣಕ್ಕಿಳಿಯುತ್ತಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**